ADVOCATE GENERAL'S OFFICE
No 4942
Date 3/2/24
Bengaluru - 560 001

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ :ಆಇ (ವಿಶೇಷ) 04 ಪಿಇಟಿ 2005, ದಿನಾಂಕ:31.03.2006.
2. ಸರ್ಕಾರಿ ಆದೇಶ ಸಂಖ್ಯೆ:ಆಇ (ವಿಶೇಷ) 28 ಪಿಇಎನ್ 2009, ದಿನಾಂಕ:29.03.2010.
3. ಸರ್ಕಾರಿ ಆದೇಶ ಸಂಖ್ಯೆ: DPAR 109 SPP 2023, ದಿನಾಂಕ:18.10.2023.

******

**ಪ್ರಸ್ತಾವನೆ :**

ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರಿ ಆದೇಶದನ್ವಯ ದಿನಾಂಕ: 01.04.2006 ರಂದು ಹಾಗೂ ತದನಂತರ ಸರ್ಕಾರಿ ಸೇವೆಗೆ ಸೇರಿದ ಎಲ್ಲಾ ಸರ್ಕಾರಿ ನೌಕರರಿಗೆ ನೂತನ ಅಂಶದಾಯಿ ಕೊಡುಗೆ ಯೋಜನೆಯನ್ನು (ರಾಷ್ಟ್ರೀಯ ಪಿಂಚಣಿ ಯೋಜನೆ) ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ.

ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿನ ಸೂಚನೆಗಳನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಮಾರ್ಗಸೂಚಿಯನ್ನು ರೂಪಿಸುವುದರೊಂದಿಗೆ ಈ ಯೋಜನೆಯನ್ನು ಕಾರ್ಯಗತಗೊಳಿಸಲಾಗಿದೆ.

ಕೇಂದ್ರ ಸರ್ಕಾರವು ತನ್ನ ನೌಕರರಿಗೆ ದಿನಾಂಕ:22.12.2003ರ ಮೊದಲು ನೇಮಕಾತಿ/ನೇಮಕಾತಿಗಾಗಿ ಜಾಹೀರಾತು/ಅಧಿಸೂಚಿಸಲಾದ ಹುದ್ದೆ ಅಥವಾ ರಿಕ್ತ ಸ್ಥಾನದ ಎದುರಾಗಿ ನೇಮಕಾತಿ ಹೊಂದಿ ದಿನಾಂಕ:01.01.2004ರಂದು ಅಥವಾ ತದನಂತರ ಸೇವೆಗೆ ಸೇರಿದ ನೌಕರರಿಗೆ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ಒಂದು ಬಾರಿಯ ಆಯ್ಕೆಯ ಅವಕಾಶವನ್ನು ಕಲ್ಪಿಸಿ ದಿನಾಂಕ:31.08.2023 ರೊಳಗೆ ಆಯ್ಕೆ ಮಾಡಿಕೊಳ್ಳಲು ಕೇಂದ್ರ ಸರ್ಕಾರದ ದಿನಾಂಕ:03.03.2023ರ ಅಧಿಕೃತ ಜ್ಞಾಪನದಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಿದೆ. ಓದಲಾದ ಕ್ರಮ ಸಂಖ್ಯೆ(3)ರ ಸರ್ಕಾರಿ ಆದೇಶದನ್ವಯ ರಾಜ್ಯ ಸರ್ಕಾರದ ಸೇವೆಯಲ್ಲಿರುವ ಅಖಿಲ ಭಾರತ ಸೇವೆಗೆ ಸೇರಿದ ಅರ್ಹ ಅಧಿಕಾರಿಗಳನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಿ ಆದೇಶಿಸಿದೆ.

ಕೇಂದ್ರ ಸರ್ಕಾರದ ದಿನಾಂಕ: 03.03.2023ರ ಅಧಿಕೃತ ಜ್ಞಾಪನದಲ್ಲಿ ಸಂಬಂಧಿತ ಕೇಂದ್ರ ಸರ್ಕಾರಿ ನೌಕರರಿಗೆ ಕಲ್ಪಿಸಲಾದ ಸೌಲಭ್ಯವನ್ನು ಅದೇ ಸನ್ನಿವೇಶದಲ್ಲಿರುವ ರಾಜ್ಯ ಸರ್ಕಾರಿ ನೌಕರರಿಗೂ ಅನ್ವಯಿಸಲು ತೀರ್ಮಾನಿಸಿದ ಸರ್ಕಾರವು ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ

ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಡಿಸಲು ಸಂಬಂಧಪಟ್ಟ ಸರ್ಕಾರಿ ನೌಕರರಿಂದ ಅಭಿಮತವನ್ನು ಪಡೆದು ಕ್ರಮಕೈಗೊಳ್ಳುವುದು ಸೂಕ್ತವೆಂದು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ಬೆಂಗಳೂರು, ದಿನಾಂಕ: 24.01.2024.**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ: 01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ: 01.04.2006ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ ನೌಕರರನ್ನು ಸರ್ಕಾರವು ಅವರ ಅಭಿಮತದ ಮೇರೆಗೆ ಕೆಳಕಂಡ ಷರತ್ತುಗಳಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಒಪ್ಪಿಗೆ ನೀಡಿದೆ:-

1. ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ಸರ್ಕಾರಿ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಇಚ್ಛಿಸಿದಲ್ಲಿ ತಮ್ಮ ಅಭಿಮತವನ್ನು ನಿಗಧಿತ ನಮೂನೆಯಲ್ಲಿ ದಿನಾಂಕ: 30.06.2024ರೊಳಗೆ ಸಕ್ಷಮ ನೇಮಕಾತಿ ಪ್ರಾಧಿಕಾರಕ್ಕೆ ನೇರವಾಗಿ ಸಲ್ಲಿಸತಕ್ಕದ್ದು. ಈ ಆಯ್ಕೆಯನ್ನು ಒಂದು ಬಾರಿಗೆ ಮಾತ್ರ ಚಲಾಯಿಸಲು ಅವಕಾಶವಿರುತ್ತದೆ.
2. ಒಂದು ಬಾರಿ ಮಾಡಿಕೊಂಡ ಆಯ್ಕೆಯನ್ನು ಬದಲಾಯಿಸಲು ಅವಕಾಶವಿಲ್ಲ.
3. ಮೇಲಿನ 1 ರಂತೆ ಆಯ್ಕೆಯನ್ನು ಚಲಾಯಿಸಲು ಅರ್ಹ ಸರ್ಕಾರಿ ನೌಕರರು ನಿಗಧಿತ ದಿನಾಂಕದೊಳಗೆ ತಮ್ಮ ಆಯ್ಕೆಯನ್ನು ಚಲಾಯಿಸದೇ ಇದ್ದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿ ಮುಂದುವರೆಯುತ್ತಾರೆ.
4. ನೌಕರರ ಆಯ್ಕೆಗನುಸಾರ ಅವರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಲು ನಿಗಧಿತ ಅರ್ಹತೆಯನ್ನು ಹೊಂದಿರುವುದನ್ನು ಸಕ್ಷಮ ನೇಮಕಾತಿ ಪ್ರಾಧಿಕಾರವು ಖಚಿತಪಡಿಸಿಕೊಂಡು ದಿನಾಂಕ: 31.07.2024 ರೊಳಗಾಗಿ ಅಂತಹ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ಶಿಫಾರಸ್ಸಿನೊಂದಿಗೆ ಇಲಾಖಾ ಮುಖ್ಯಸ್ಥರಿಗೆ ಕ್ರೋಢೀಕೃತ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.
5. ಇಲಾಖಾ ಮುಖ್ಯಸ್ಥರು ತಮ್ಮ ಅಧೀನದ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಅರ್ಹ ನೌಕರರ ಪಟ್ಟಿಯನ್ನು ದಿನಾಂಕ: 31.08.2024ರೊಳಗೆ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಸಲ್ಲಿಸತಕ್ಕದ್ದು.
6. ದಿನಾಂಕ: 01.04.2006ರ ಪೂರ್ವದಲ್ಲಿನ ರಾಜ್ಯ ಸಿವಿಲ್ ಸೇವೆಯಲ್ಲಿನ ಖಾಲಿ ಹುದ್ದೆಗಳಿಗೆ ಹೊರಡಿಸಲಾದ ನೇಮಕಾತಿ ಅಧಿಸೂಚನೆಯನ್ವಯ ಆಯ್ಕೆಯಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ತದನಂತರ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಿ ಸರ್ಕಾರದ ಅನ್ಯ ಇಲಾಖೆಯಲ್ಲಿನ ಹುದ್ದೆಗೆ ನೇಮಕಾತಿ ಹೊಂದಿದ ಅರ್ಹ ಸರ್ಕಾರಿ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆ ಸೌಲಭ್ಯ ಪಡೆದುಕೊಳ್ಳಲು ಇಚ್ಛಿಸಿದಲ್ಲಿ ಮನವಿಯನ್ನು ಹಿಂದಿನ ನೇಮಕಾತಿ ಪ್ರಾಧಿಕಾರಕ್ಕೆ

ದಿನಾಂಕ: 30.06.2024ರೊಳಗಾಗಿ ಸಲ್ಲಿಸತಕ್ಕದ್ದು. ನೇಮಕಾತಿ ಪ್ರಾಧಿಕಾರವು ಅಂತಹ ಸರ್ಕಾರಿ ನೌಕರನು ಸಮುಚಿತ ಮಾರ್ಗದಲ್ಲಿ ಅರ್ಜಿ ಸಲ್ಲಿಸಿ ಅನ್ಯ ಇಲಾಖೆಗೆ ಆಯ್ಕೆಯಾದ ಹುದ್ದೆಗೆ ವರದಿಮಾಡಿಕೊಳ್ಳುವ ಸಲುವಾಗಿ ಬಿಡುಗಡೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಮೇಲಿನ ಕ್ರಮ ಸಂಖ್ಯೆ (4) ರಂತೆ ಪರಿಶೀಲಿಸಿ ಮೇಲಿನ ಕ್ರಮ ಸಂಖ್ಯೆ (5) ರಂತೆ ಮುಂದಿನ ಕ್ರಮಕ್ಕಾಗಿ ಕಳುಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/1/2024

(ಅರುಳ್ ಕುಮಾರ್. ಕೆ.ಎ.ಎಸ್.)
ಸರ್ಕಾರದ ಉಪ ಕಾರ್ಯದರ್ಶಿ
(ಆಡಳಿತ ಮತ್ತು ಸಮನ್ವಯ)
ಆರ್ಥಿಕ ಇಲಾಖೆ

24/1/24

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ:

1. ಮಹಾಲೇಖಪಾಲರು (ಎ& ಇ), ಕರ್ನಾಟಕ, ಪೋಸ್ಟ್ ಬಾಕ್ಸ್ ಸಂಖ್ಯೆ:5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಕಾರ್ಯದರ್ಶಿಗಳು.
5. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
6. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
7. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ ಮೈಸೂರು/ಬೆಳಗಾವಿ/ಗುಲ್ಬರ್ಗ.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
9. ಖಜಾನೆ ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆ.ಪಿ.ಸಿ.ಎಲ್. ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು 560 001.
10. ಎಲ್ಲಾ ಜಿಲ್ಲಾಧಿಕಾರಿಗಳು.
11. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
13. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
14. ಖಜಾನೆ ಅಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ / ಜಿಲ್ಲಾ ಖಜಾನೆಗಳು.
15. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
16. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ, ವಿಧಾನ ಮಂಡಲದ ಗ್ರಂಥಾಲಯ.
17. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಸರ್ಕಾರಿ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ಕ್ಕೆ ಅನುಬಂಧ**

**ನಮೂನೆ**

ರವರಿಗೆ,

*(ಅಧಿಕಾರಿ/ನೌಕರರ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರ)*

.................................. ಇಲಾಖೆ,

..............................

ಮಾನ್ಯರೇ,

ವಿಷಯ: ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

ಉಲ್ಲೇಖ: ಸರ್ಕಾರಿ ಆದೇಶ ಸಂ: ಆಇ-ಪಿಇಎನ್/99/2023, ದಿನಾಂಕ: 24.01.2024

............................................................ ಇಲಾಖೆಯಲ್ಲಿ ............................................ ಆಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ/ಶ್ರೀಮತಿ............................................................ ಆದ ನಾನು, ಪ್ರಪ್ರಥಮವಾಗಿ ..................................................... ಇಲಾಖೆಯಲ್ಲಿ .................................. ಹುದ್ದೆಗೆ ದಿನಾಂಕ:.......................... ರಂದು ಸರ್ಕಾರಿ ಸೇವೆಯಲ್ಲಿ ವರದಿ ಮಾಡಿಕೊಂಡಿರುತ್ತೇನೆ. ಈ ಹುದ್ದೆಗೆ ನೇಮಕಾತಿ ಅಧಿಸೂಚನೆಯ ಪ್ರಕಟಣೆಯನ್ನು ದಿನಾಂಕ: ........................ ರಂದು ಹೊರಡಿಸಲಾಗಿರುತ್ತದೆ. ನಾನು ಉಲ್ಲೇಖಿತ ಆದೇಶದನ್ವಯ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಲು ಅರ್ಹವಿರುವುದರಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ನನ್ನ ಅಭಿಮತವನ್ನು ಈ ಮೂಲಕ ತಿಳಿಸುತ್ತಾ, ಈ ಕೆಳಕಂಡ ಮಾಹಿತಿ / ದಾಖಲೆಗಳನ್ನು ಇದರೊಂದಿಗೆ ಸಲ್ಲಿಸುತ್ತಿದ್ದೇನೆ:

01 ಹುದ್ದೆಗಳ ಭರ್ತಿಗಾಗಿ ಪ್ರಕಟಿಸಲಾದ ನೇಮಕಾತಿ ಅಧಿಸೂಚನೆ ದಿನಾಂಕ:................ರ ಪ್ರತಿಯನ್ನು ಲಗತ್ತಿಸಿದೆ.

02 ಸಂಬಂಧಪಟ್ಟ ಆಯ್ಕೆ ಪಟ್ಟಿ ದಿನಾಂಕ:................ರ ಪ್ರತಿಯನ್ನು ಲಗತ್ತಿಸಿದೆ.

03 ನೇಮಕಾತಿ ಆದೇಶ ದಿನಾಂಕ:................ರ ಪ್ರತಿಯನ್ನು ಲಗತ್ತಿಸಿದೆ

04 ನೇಮಕಾತಿಯ ನಂತರ ಇಲಾಖೆ ಬದಲಾವಣೆಯಾಗಿದೆಯೇ? ವಿವರಗಳನ್ನು ನೀಡುವುದು

05 ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಚೇರಿ/ಇಲಾಖೆಯ ವಿಳಾಸ:

06 ಕೆಜಿಐಡಿ ಸಂಖ್ಯೆ :

07 NPS ಪ್ರಾನ್ ಸಂಖ್ಯೆ:

08 ಪ್ರಸ್ತುತ ವೇತನ ಚೀಟಿ:

*(ಸಹಿ ಮತ್ತು ಹೆಸರು)*

ದಿನಾಂಕ:

24/1/2024